## 38. ಮಿತಿ ಮೀರಿದ ಮಿಡತೆ ಹಾವಳಿ

ಪಾಕಿಸ್ತಾನದಿಂದ ದಂಡೆತ್ತಿ ಬಂದಿರುವ ಮಿಡತೆಗಳ ಹಿಂಡು ದಿನೇ ದಿನೇ ಒಂದೊಂದೇ ರಾಜ್ಯ ಪ್ರವೇಶಿಸುತ್ತಿದೆ. ಪ್ರಸ್ತುತ ಏಳು ರಾಜ್ಯಗಳಲ್ಲಿ ತನ್ನ ಹಾವಳಿ ಆರಂಭಿಸಿದೆ. 20 ಜಿಲ್ಲೆಗಳ 303 ಪ್ರದೇಶಗಳಲ್ಲಿ ಒಟ್ಟು 47,000 ಹೆಕ್ಟೇರ್ ಕೃಷಿ ಭೂಮಿಯಲ್ಲಿನ ಬೆಳೆಗೆ ಮಿಡತೆಗಳು ಮುತ್ತಿಗೆ ಹಾಕಿದೆ. ಪರಿಸ್ಥಿತಿಯ ಗಂಭೀರತೆ ಅರಿತ ಕೇಂದ್ರ ಸರ್ಕಾರ ಕೀಟಗಳ ನಿಯಂತ್ರಣಕ್ಕೆ ಪರಿಣಾಮಕಾರಿ ಕ್ರಮಗಳನ್ನು ಕೈಗೊಳ್ಳುತ್ತಿದೆ.

ಮಹಾರಾಷ್ಟ್ರ, ರಾಜಸ್ಥಾನ, ಗುಜರಾತ್, ಮಧ್ಯಪ್ರದೇಶ ಮತ್ತು ಹರಿಯಾಣ ರಾಜ್ಯಗಳಲ್ಲಿದ್ದ ಮಿಡತೆಗಳು ಬೆಳಗಾಗುವ ವೇಳೆಗೆ ಉತ್ತರಪ್ರದೇಶ ಮತ್ತು ಪಂಜಾಬ್ ಗಡಿಯನ್ನೂ ಪ್ರವೇಶಿಸಿವೆ. ಪಂಜಾಬ್‌ನಲ್ಲಿ ಕಟ್ಟೆಚ್ಚರ ವಹಿಸುವಂತೆ ಸೂಚಿಸಲಾಗಿದೆ. ರಾಜಸ್ಥಾನದ 20 ಜಿಲ್ಲೆಗಳು, ಮಧ್ಯಪ್ರದೇಶದ ಒಂಭತ್ತು, ಮಹಾರಾಷ್ಟ್ರ, ಗುಜರಾತ್‌ನಲ್ಲಿ ತಲಾ ಎರಡು  ಹಾಗೂ ಉತ್ತರಪ್ರದೇಶ, ಪಂಜಾಬ್‌ನ ತಲಾ ಒಂದು ಜಿಲ್ಲೆಯಲ್ಲಿ ಮಿಡತೆಗಳ ಹಿಂಡು ಕಾಣಿಸಿಕೊಂಡಿದೆ ಎಂದು ಕೃಷಿ ಸಚಿವಾಲಯ ತಿಳಿಸಿದೆ.

ಮಿಡತೆಗಳ ಮೇಲೆ ರಾಸಾಯನಿಕ ಸಿಂಪಡಿಸಲು 60 ಹೆಚ್ಚುವರಿ ಸುಧಾರಿತ ಸ್ಪ್ರೇಯರ್‌ಗಳನ್ನು ಯುನೈಟೆಡ್ ಕಿಂಗ್‌ಡಮ್‌ನಿಂದ ತರಿಸಿಕೊಳ್ಳಲು ಕೇಂದ್ರ ಕೃಷಿ ಸಚಿವಾಲಯ ಸಮ್ಮತಿಸಿದೆ. ಇದರೊಂದಿಗೆ ಮಿಡತೆಗಳ ಪರಿಣಾಮಕಾರಿ ನಿಯಂತ್ರಣಕ್ಕಾಗಿ ಕೀಟನಾಶಕ ಸಿಂಪಡಿಸಲು 89 ಅಗ್ನಿಶಾಮಕ ವಾಹನಗಳು, 120 ಸರ್ವೇ ವಾಹನಗಳು, ರಾಸಾಯನಿಕ ಸಿಂಪಡನೆ ಸಾಧನೆಗಳನ್ನು ಒಳಗೊಂಡ 47 ನಿಯಂತ್ರಕ ವಾಹನಗಳು ಮತ್ತು ಸ್ಪ್ರೇಯರ್‌ಗಳನ್ನು ಅಳವಡಿಸಿರುವ 810 ಟ್ರ್ಯಾಕ್ಟರ್‌ಗಳನ್ನು ವಿವಿಧ ರಾಜ್ಯಗಳಲ್ಲಿ ಈಗಾಗಲೇ ನಿಯೋಜಿಸಲಾಗಿದೆ ಎಂದು ಕೃಷಿ ಸಚಿವ ನರೇಂದ್ರ ಸಿಂಗ್ ತೋಮರ್ ತಿಳಿಸಿದ್ದಾರೆ.

ಆಧಾರ:ಉದಯವಾಣಿ, ದಿನಾಂಕ:29.05.2020